# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 807(858) |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 15.12.2025 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು, ಇಲ್ಲಿ ಗಣಕ ವಿಜ್ಞಾನ ಅಧ್ಯಯನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಸಹ ಪ್ರಾಧ್ಯಾಪಕರೊಬ್ಬರು ಪ್ರಾಜೆಕ್ಟ್ ಕಾರ್ಯಗಳನ್ನು ಪೂರ್ಣಗೊಳಿಸಲು ಲಂಚ ಪಡೆಯುತ್ತಿರುವ ಬಗೆಗಿನ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಆದರೆ, ಡಾ. ಸುಮತಿ.ಆರ್.ಗೌಡ, ಸಹ ಪ್ರಾಧ್ಯಾಪಕರು, ಗಣಕವಿಜ್ಞಾನ ಅಧ್ಯಯನ ವಿಭಾಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಇವರ ವಿರುದ್ಧ ವಿದ್ಯಾರ್ಥಿಗಳಿಂದ ಲಂಚ ಕೇಳಿರುವುದಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವಿದ್ಯಾರ್ಥಿಯಾದ ಶ್ರೀ ಆದಿತ್ಯ ಇವರು ವಿಶ್ವವಿದ್ಯಾಲಯದ ಕುಲಪತಿಗಳಿಗೆ ಹಾಗೂ ಕುಲಸಚಿವರು, (ಆಡಳಿತ ಮತ್ತು ಮೌಲ್ಯಮಾಪನ) ಇವರುಗಳಿಗೆ ದೂರು ದಾಖಲಿಸಿರುತ್ತಾರೆ.<br><br>ಸದರಿ ದೂರುಗಳನ್ನು ವಿಶ್ವವಿದ್ಯಾಲಯವು ಕೂಲಂಕಷವಾಗಿ ಪರಿಶೀಲಿಸಿ ಪ್ರಕರಣದಲ್ಲಿ ಡಾ. ಸುಮತಿ.ಆರ್.ಗೌಡ, ಸಹ ಪ್ರಾಧ್ಯಾಪಕರು, ಗಣಕವಿಜ್ಞಾನ ಅಧ್ಯಯನ ವಿಭಾಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಇವರು ತಪ್ಪಿತಸ್ಥರೆಂದು ಕಂಡುಬಂದ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯವು ಅಳವಡಿಸಿಕೊಂಡಿರುವ ಮೈಸೂರು ವಿಶ್ವವಿದ್ಯಾಲಯದ ಉದ್ಯೋಗಿಗಳ (ಸಿಸಿಎ) ಪರಿನಿಯಮ-7 (1)(ಎ) ಪ್ರಕಾರ ದಿನಾಂಕ: 25.11.2025ರಂದು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿರುತ್ತದೆ. |
| (ಆ) | ಬಂದಿದ್ದರೆ, ಅಮಾಯಕ ವಿದ್ಯಾರ್ಥಿಗಳಿಂದ ಪಡೆಯಲಾದ ಹಣವನ್ನು ಹಿಂತಿರುಗಿಸಲು ಹಾಗೂ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ? | |

**ಸಂಖ್ಯೆ:** ಇಡಿ 63 ಯುಓವಿ 2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು